ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟಿನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 130.

ಮೃತಪಟ್ಟ ಪರಮೇಶ್ವರಪಟ್ಟ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಹೊನ್ನಪ್ಪ ಮೃತಪಟ್ಟ ಸದರೀ ಪರಮೇಶ್ವರಪಟ್ಟಗೆ ಒರೇ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ನಾಗಮಂಗಲ ತಾ॥ ನೆಲ್ಲೀಗೆರೆ ಹೋಬಳಿ ಬೆಳ್ಳೂರು ಸ್ಥಳದ ಸದರೀ ಹೊನ್ನಪ್ಪನು, ಸದರೀ ವಾಸಸ್ಥನಾಗಿ ಮೃತಪಟ್ಟ ಪರಮೇಶ್ವರಪಟ್ಟ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಹೊನ್ನಪ್ಪನ ಅರ್ಜಿಯನ್ನು 1884ನೇ ಇಸವಿ ಜೂರ್ ತಿಂಗಳು ತಾರೀಖು 5ರಲ್ಲು ಮೈಸೂರು ಮೊಕ್ಕಾಮಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪರಮೇಶ್ವರಪಟ್ಟ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವೀ ಅರ್ಜೀ ನಂಬರ್ 136.

ಮೃತಪಟ್ಟ ಖಾಜಿ ಸೈದ್ ಅಹಮ್ಮದ್ ಸಾಬನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಖಾಜಿ ಸೈದ್ ನಸರಹುಸೇನ್‌ಸಾಬಿ, ಮೃತಪಟ್ಟ ಸದರೀ ಖಾಜಿಸೈದ್ ಅಹಮ್ಮದ್ ಸಾಬರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಸ್ಥಳದ ಸದರೀ ಖಾಜಿಸೈದ್ ನಸರಹುಸೇನ್ ಸಾಬಿ, ಸದರೀ ವಾಸಸ್ಥನಾಗಿ ಮೃತಪಟ್ಟ ಖಾಜಿ ಸೈದ್ ಅಹಮ್ಮದ್ ಸಾಬಿ ಜಿಂದಗೀ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಖಾಜಿಸೈದ್ ನಸರಹುಸೇನ್‌ಸಾಬಿ ಅರ್ಜೀಯನ್ನು 1884ನೇ ಇಸವಿ ಜೂರ್ ತಿಂಗಳು ತಾರೀಖು 24ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಖಾಜಿಸೈದ್ ಅಹಮ್ಮದ ಸಾಬರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರಿರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಏಪ್ರೆಲ್ ತಿಂಗಳು 3ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮದಸ್ತಖತ್ತೊಡನೆ ಕೊಡೋಣಾಗಿಧೆ.

1884ನೇ ಇಸವಿ ಅರ್ಜೀ ನಂಬರ್ 135.

ಅರ್ಜೀದಾರ ಮಂಡ್ಯ ತಾಲ್ಲೂಕು ಕಂಚನಹಳ್ಳಿಲಿರುವ 1 ಕುಳ್ಳೇಗೌಡ, 2 ಚಿಕ್ಕಬಸವೇಗೌಡ ಮೈನರಾದ ಮಂಡ್ಯ ತಾಲ್ಲೂಕು ಕಂಚನಹಳ್ಳಿ ಸ್ಥಳದ ಕಾಳೇಗೌಡನ ಮಗ ಬೊಮ್ಮನ ಆಸ್ತಿ ವಿಷಯದಲ್ಲಿ—

ಸದರೀ ಮೈನರಾದ ಬೊಮ್ಮನಿಗೆ ದಾಯಾದಿ ಆಗಬೇಕೆಂಬ ಹಕ್ಕಿನ ಮೇಲೆ ಸದರೀ ಸ್ಥಳದ ಕುಳ್ಳೇಗೌಡ, ಚಿಕ್ಕಬಸವೇಗೌಡ ಸಹ ಸದರೀ ಮೈನರಿನ ಆಸ್ತಿ ಕಾಪಾಡುವದಕ್ಕೆ ಸರಟಿಫಿಕೇಟ್ ಬಗ್ಯೆ ಮತ್ತು ಸದರೀ ಮೈನರಿಗೆ ಗಾರ್ಡಿಯನ್ ಆಗಿ ಮೊಕರರ್ ಮಾಡತಕ್ಕ ಬಗ್ಯೆ ಅರ್ಜಿ ಕೊಟ್ಟು ಇರುತ್ತಾರೆ.

ಸದರೀ ಅರ್ಜೀ ಹಿಯರಿಂಗ್ ಬಗ್ಯೆ ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ 1884ನೇ ಇಸವಿ ಜೂರ್ ತಾರೀಖು 24ರಲ್ಲು ಮೊಕರರ್ ಮಾಡಿರುವದಾಗಿ ಇದರಿಂದ ನೋಟೀಸ್ ಕೊಡೋಣಾಗಿಧೆ.

1884ನೇ ಇಸವಿ ಏಪ್ರೆಲ್ ತಿಂಗಳು 8ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

1884ನೇ ಇಸವಿ ಅರ್ಜೀ ನಂಬರ್ 146.

ಮೃತಪಟ್ಟ ನಾಗುಬಾಯಿ ಶ್ಯಾಮರಾವ್ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಲಕ್ಷ್ಮಣರಾವ್, ಮೃತಪಟ್ಟ ಸದರೀ ನಾಗುಬಾಯಿ ಶ್ಯಾಮರಾವುಗೆ ಬಂಧು ಆಗಬೇಕೆಂಬ ಹಕ್ಕುದಾರೀ ಮೇಲೆ ನೈಸೂರು ಸ್ಥಳದ ಸದರೀ ಲಕ್ಷ್ಮಣರಾವ್, ಸದರೀ ವಾಸಸ್ಥರಾಗಿ ಮೃತಪಟ್ಟ ನಾಗುಬಾಯಿ ಶ್ಯಾಮರಾವ್ ಜಿಂದಗೀ ಬಗ್ಗಾಗಿ ಬರತಕ್ಕ 70—6—0 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಲಕ್ಷ್ಮಣರಾವ್, ಅರ್ಜೀಯನ್ನು 1884ನೇ ಇಸವೀ ಜೂನ್ ತಿಂಗಳು ತಾರೀಖು 24ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಾಗುಬಾಯಿ, ಶ್ಯಾಮರಾವ್ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಏಪ್ರಿಲ್ ತಿಂಗಳು 11ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಅರ್ಜೀ ನಂಬರ್ 156.

ಮೃತಪಟ್ಟ ಸೂರನಾರಣಭಟ್ಟನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ನಂಜುಂಡಯ್ಯ, ಮೃತಪಟ್ಟ ಸದರೀ ಸೂರನಾರಣಭಟ್ಟನಿಗೆ, ದತ್ತು ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಅತ್ತಿಕುಪ್ಪಾ ತಾಲ್ಲೂಕು ಕನ್ನಂಬಾಡಿ ಸ್ಥಳದ ಸದರೀ ನಂಜುಡಯ್ಯನು ಸದರೀ ವಾಸಸ್ಥನಾಗಿ ಮೃತಪಟ್ಟ ಸೂರನಾರಣಭಟ್ಟನ ಜಿಂದಗಿ ಬಗ್ಗಾಗಿ ಬರತಕ್ಕ 200 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವಕ್ಕೆ 1860ನೇ ಇಸವೀ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾನೆ.

ಸದರೀ ದರಖಾಸ್ತುದಾರನಾದ ನಂಜುಂಡಯ್ಯನ ಅರ್ಜಿಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು 24ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸೂರನಾರಣಭಟ್ಟನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಇದೆ.

1884ನೇ ಇಸವಿ ಏಪ್ರಿಲ್ ತಿಂಗಳು 9ನೇ ತಾರೀಖಿಲ್ಲಿನ ಈ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ವಿ. ಎಸ್. ನರಸಿಮ್ಮಯ್ಯಂಗಾರ್,
ಡಿಸ್ಟ್ರಿಕ್ಟ್ ಜಡ್ಜ್.

ತಾರೀಖು 17ನೇ ಏಪ್ರಿಲ್ 1884.

ಇದರಿಂದ ತಿಳಿಯಪಡಿಸುವದೇನಂದರೆ, ತಿರುಮಕೂಡ್ಲು ನರಸಿಪ್ಪುರ ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಜೀವಾರಸಾಗಿ ಇರತಕ್ಕ ಕೆಳಗೆ ವಿವರಿಸೋಣಾದ ದಸ್ತಾವೇಜನ್ನು ಹಾಜರ್ಮಾಡಿದವನೇ ಆಗಲಿ ಅಥವಾ ವಾಪಸ್ ಪಡಿಯಲೀಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನಾಗಲಿ ಈ ನೋಟೀಸ್ ತಾರೀಖು ಲಾಗಾಯಿತು ಎಂದು ತಿಂಗಳ ವಳಗಾಗಿ ಸಬ್ ರಿಜಿಸ್ಟ್ರಾರ್ ರೂಬರೂ ಹಾಜರಾಗಿ ಅದರನ್ನು ವಾಪಸ್ ತೆಗದುಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟ್ 85ನೇ ಸೆಕ್ಷನ್ ಅನುಸರಿಸಿ ಅದರನ್ನು ನಾಶ ಪಡಿಸಲ್ಪಡುವದು.

ನಂಬರ್.	ದಸ್ತಾವೇಜು ಬರದುಕೊಟ್ಟವನ ಹೆಸರು ಮತ್ತು ವಾಸಸ್ಥಳ.	ಬರಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ರಿಜಿಸ್ಟ್ರಿಯಾದ ತಾರೀಖು.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
741	ಮೈಸೂರನಲ್ಲಿ ಇರುವ ಸ್ಮಾರ್ತ ಬ್ರಾಹ್ಮಣ ಮುದು	ತಲಕಾಡು ತಾಲ್ಲೂಕು	18—3—82	18—3—82	(300) ರೂಪಾಯಿನ ಭೂಸ್ತಿತಿ
81—82ನೇ ಇಸವಿ	ಗಂಡೂರು ಕಪನಯ್ಯನವರ ಮೊಮ್ಮಗ ಅರಮನೆ ನೌಕರೀಯಿಂದ ಜೀವಿಸುವ ವೆಂಕಟಭಟ್ಟ.	ಜೋಡಿ ಬೊಮ್ಮನಾಯಿಕನಹಳ್ಳಿಯಲ್ಲಿ ಇರುವ ಕುರುಬ ಕೊಡಂಗಿ ಮಾದೇಗೌಡನಮಗ ಕೂಲಿ ಜೀವನದ ಬಸವೇಗೌಡ.			ಆಧಾರ ಪತ್ರ.

ಅಬ್ದುಲ್‌ಖಾದರ್, ಕೆ. ಬಿ., ರಿಜಿಸ್ಟ್ರಾರ್.